**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ. 2300/2022**

ಪಿ.ಡಬ್ಲ್ಯೂಃ 1

ಸಿ.ಡಬ್ಲ್ಯೂಃ 1

ಸಾಕ್ಷಿದಾರರ ಹೆಸರು ಃ ರುಕ್ಮಿಣಿ

ಗಂಡನ ಹೆಸರು ಃ ಕೆಂಚಪ್ಪ

ವಯಸ್ಸು ಃ 40 **ವರ್ಷ**

ಉದ್ಯೋಗ ಃ ಗೃಹಿಣಿ

ವಾಸಸ್ಥಳ ಃ ನಂದಿಬಟ್ಟಲು

**ದಿನಾಂಕಃ21-04-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ ಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

1ನೇ ಆರೋಪಿ ನನ್ನ ಮಾವ . 2ನೇ ಆರೋಪಿ ನನ್ನ ಅತ್ತೆ. ಚಾಸಾ-2 ನನ್ನ ಗಂಡ. ದಿನಾಂಕಃ 30-08-2021 ರಂದು ಸಂಜೆ 5-30 ಗಂಟೆ ಸಮಯದಲ್ಲಿ ನಂದಿಬಟ್ಟಲು ಗ್ರಾಮದ ನಮ್ಮ ಮನೆಯ ಹತ್ತಿರ ನಮ್ಮಮನೆಯನ್ನು ರಿಪೇರಿ ಮಾಡಲು ಕೂಲಿ ಆಳುಗಳನ್ನು ಬಿಟ್ಟಿದ್ದು, ಆರೋಪಿಗಳು ಮನೆ ಅವರಿಗೆ ಸೇರಬೇಕೆಂದು ಜಗಳ ಮಾಡಿದ್ದು, ಅದನ್ನು ಕೇಳಲು ನಾನು ಹೋದಾಗ 2ನೇ ಆರೋಪಿ ನನ್ನ ತಲೆ ಕೂದಲನ್ನು ಹಿಡಿದು ಎಳೆದಾಡಿ, 1ನೇ ಆರೋಪಿಯು ಕಲ್ಲಿನಿಂದ ಹೊಡೆದು ನನ್ನ ಬೆನ್ನಿಗೆ ಗಾಯ ಮಾಡಿರುತ್ತಾರೆ. ಅವಾಚ್ಯ ಶಬ್ದಗಳಿಂದ ಬೈದು ಕೊಲೆ ಬೆದರಿಕೆ ಹಾಕಿರುತ್ತಾರೆ. ಕೆಲಸ ಮಾಡುತ್ತಿದ್ದ ಕೆಲಸಗಾರರಿಗೂ ಸಹ ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ. ನಮ್ಮ ಮನೆಯವರು ಗಲಾಟೆಯಾದ ಸಮಯದಲ್ಲಿ ಊರಿನವರು ಇರಲಿಲ್ಲ. ಅವರು ಬಂದ ನಂತರ ಅವರಿಗೆ ವಿಚಾರವನ್ನು ತಿಳಿಸಿದೆನು. ನಂತರ ಅವರ ಹತ್ತಿರ ಸಹ 1 ಮತ್ತು 2ನೇ ಆರೋಪಿ ಬೈದಿರುತ್ತಾರೆ. ಗಲಾಟೆಯನ್ನು ಅಲ್ಲಿದ್ದ ಕೆಲಸಗಾರರು ಬಿಡಿಸಿರುತ್ತಾರೆ. ನಂತರ ನಾವು ತರೀಕೆರೆ ಆಸ್ಪತ್ರೆ ಗೆ ಹೋಗಿ ಚಿಕಿತ್ಸೆಯನ್ನು ಪಡೆದಿದ್ದು, ಅದೇ ದಿನ ಲಿಂಗದಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರನ್ನು ದಾಖಲಿಸಿರುತ್ತೇವೆ. ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಮಹಜರ್ ಕ್ರಮವನ್ನು ಜರುಗಿಸಿ, ಒಂದು ಕಲ್ಲನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ದೂರಾಗಿದ್ದು, ಸದರಿ ದಾಖಲೆಯನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಎರಡು ಛಾಯಚಿತ್ರಗಳನ್ನು ತೋರಿಸಲಾಗಿದ್ದು, ಅವುಗಳಲ್ಲಿ ತಮ್ಮ ಇರುವಿಕೆಯನ್ನು ಗುರುತಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-2 ಮತ್ತು 3 ಎಂದು ಗುರುತಿಸಲಾಯಿತು.

ಸಾಕ್ಷಿಯು ನ್ಯಾಯಾಲಯದ ಮುಂದೆ ಹಾಜರುಪಡಿಸಿರುವ ಒಂದು ಕಲ್ಲನ್ನು ನೋಡಿ ಗುರುತಿಸಿರುತ್ತಾರೆ. ಅದನ್ನು ಎಂ ಒ -1 ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ.**

ಪಾಟೀ ಸವಾಲಿಗಾಗಿ ಸಮಯಾವಕಾಶ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.

**ಮರುವಿಚಾರಣೆಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**